ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ., ಮೂಡಿಗೆರೆ.

ಸಿ.ಸಿ ನಂಬರ್ಃ **486/2024**

ಪಿರ್ಯಾದಿಃ ಸರ್ಕಾರ, ಪ್ರತಿನಿಧಿಸುವವರು,
ಕಳಸ ಪೊಲೀಸ್ ಠಾಣಾ ಪೋಲೀಸರು.

ವಿರುದ್ಧ

ಆರೋಪಿಃ ಉದಯಕುಮಾರ್.ಎಸ್,
ವಯಸ್ಸು ಸುಮಾರು 30 ವರ್ಷ,
ಬಿನ್ ಸೋಮಣ್ಣ, ವಾಸಃ ಯರಬಳ್ಳಿ,
ಗೊಲ್ಲಹಳ್ಳಿ ಗ್ರಾಮ, ಐಮಂಗಲ ಹೋಬಳಿ,
ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.

ದೋಷಾರೋಪಣೆ ಸಾರಾಂಶ

ಶ್ರೀ. ವಿಶ್ವನಾಥ್ ಎ., C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕಃ 23.10.2023 ರಂದು ರಾತ್ರಿ 11.00 ರ ಸಮಯದಲ್ಲಿ ಆರೋಪಿಯಾದ ನೀವು ಚಿತ್ರದುರ್ಗ ಜಿಲ್ಲೆ, ಹಿರಿಯೂರು ಬಳಿ ಕಳ್ಳತನ ಮಾಡಿಕೊಂಡು ಬಂದು ನೀವು ಬಳಸುತ್ತಿದ್ದ ಚಾಸಾ12-ರಜಾಕ್ ರವರ ಬಾಬ್ತು ಕೆಎ-64-ಇ-0755 ರ ಬೈಕಿನಲ್ಲಿ ಕಳಸ ಪೊಲೀಸ್ ಠಾಣಾ ವ್ಯಾಪ್ತಿಯ ಮಾವಿನಕೆರೆ ಗ್ರಾಮದ ಗಣಪತಿಕಟ್ಟೆ ಬಳಿಯಲ್ಲಿರಮ ಹೊಸದೇವರ ಚಾವಡಿ ಶ್ರೀ ರಾಜದೈವ ಕೊಡಮಂತಾಯ ಧೂಮವತಿ ದೈವಸ್ಥಾನದ ಬಳಿ ಹೋಗಿ, ಕಲ್ಲು ಮತ್ತು ಕಬ್ಬಿಣದ ರಾಡ್ ಅನ್ನು ಉಪಯೋಗಿಸಿಕೊಂಡು ದೇವಸ್ಥಾನದ ಬಾಗಿಲಿಗೆ ಹಾಕಿದ್ದ ಬೀಗವನ್ನು ಹೊಡೆದು ದೇವಸ್ಥಾನದ ಒಳಗೆ ಅತಿಕ್ರಮ ಪ್ರವೇಶಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **457** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ದೇವಸ್ಥಾನದ ಗರ್ಭಗುಡಿಯಲ್ಲಿಟ್ಟಿದ್ದ ಸ್ಟೀಲ್ ನ ಕಾಣಿಕೆ ಹುಂಡಿಯನ್ನು ಕಳ್ಳತನ ಮಾಡಿ, ಅದರಲ್ಲಿದ್ದ ಅಂದಾಜು 3,000/- ರೂ ಹಣವನ್ನು ಕಳ್ಳತನ ಮಾಡಿ ಉಪಯೋಗಿಸಿಕೊಂಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **380** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಕಳ್ಳತನ ಮಾಡಲು ಬಳಸಿದ್ದ ಕಬ್ಬಿಣದ ರಾಡ್ ಅನ್ನು ಕಳಸ-ಹೊರನಾಡು ಮಧ್ಯದ ರಸ್ತೆಯಲ್ಲಿ ಹರಿಯುತ್ತಿರುವ ಭದ್ರಾ ನದಿಗೆ ಎಸೆದು ಸಾಕ್ಷ್ಯ ನಾಶಪಡಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **201** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಪ್ರಃ 1.ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದೆಯಾ? ಅದು ನಿನಗೆ ಅರ್ಥವಾಯಿತೇ ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ದಿನಾಂಕಃ17.01.2025 ರಂದು ದೋಷಾರೋಪಣೆಯನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

Sd/-

ಮೂಡಿಗೆರೆ
ದಿನಾಂಕಃ17.01.2025.

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಮ್.ಎಫ್.ಸಿ., ಮೂಡಿಗೆರೆ.

ಆರೋಪಿಯ ಸಹಿಃ